# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ದಕ್ಷಿಣ ಕನ್ನಡ ಜಿಲ್ಲೆ ಮಂಗಳೂರು ತಾಲ್ಲೂಕು ಪಂಚಾಯತಿಯಲ್ಲಿ ದಿನಗೂಲಿ ನೌಕರರಾಗಿ ಸೇವೆ ಸಲ್ಲಿಸುತ್ತಿದ್ದು, ಸಕ್ರಮಗೊಂಡ ಸಿಬ್ಬಂದಿಯವರಿಗೆ ಉಚ್ಛ ನ್ಯಾಯಾಲಯದ ಆದೇಶದಂತೆ ಬಾಕಿ ವೇತನವನ್ನು ಪಾವತಿಸಲು ಹೆಚ್ಚುವರಿ ಅನುದಾನವನ್ನು ಒದಗಿಸುವ ಬಗ್ಗೆ.

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ, ಮಂಗಳೂರು ಇವರ ಪತ್ರ ದಿನಾಂಕ: 07-07-2020 ಮತ್ತು 30-07-2020.

**ಪ್ರಸ್ತಾವನೆ:**

ಶ್ರೀಮತಿ ಹಿಲ್ಡಾ ಮನೋರಂಜನಿ, ನಿವೃತ್ತ ಬೆರಳಚ್ಚುಗಾರರು, ತಾಲ್ಲೂಕು ಪಂಚಾಯತಿ, ಇವರು ದಿನಾಂಕ:5.10.1984ರಂದು ದಿನಗೂಲಿ ಆಧಾರದ ಮೇಲೆ ಬೆರಳಚ್ಚುಗಾರರಾಗಿ ಸೇವೆಗೆ ಸೇರಿದ್ದು ಸದರಿಯವರ ಸೇವೆಯನ್ನು ಸಕ್ರಮಗೊಳಿಸದ ಕಾರಣ ಅಕ್ಟೋಬರ್ 1992ರಿಂದ ಅನ್ವಯವಾಗುವಂತೆ ಅಕ್ಟೋಬರ್ 2013ರವರೆಗೆ ವ್ಯತ್ಯಾಸದ ವೇತನವನ್ನು ಸದರಿಯವರಿಗೆ ಪಾವತಿಸುವಂತೆ ಘನತೆವೆತ್ತ ಉಚ್ಛ ನ್ಯಾಯಾಲಯ ಆದೇಶಸಿದ್ದು, ಸದರಿಯವರಿಗೆ ರೂ.6.90ಲಕ್ಷಗಳನ್ನು ಪಾವತಿಸಬೇಕಾಗಿದ್ದು, ಸದರಿ ಮೊತ್ತವನ್ನು ಲೆಕ್ಕ ಶೀರ್ಷಿಕೆ 2515-00-102-0-61-005ರಡಿ ಹೆಚ್ಚುವರಿಯಾಗಿ ಒದಗಿಸಿ ಬಿಡುಗಡೆಗೊಳಿಸಲು ಪ್ರಸ್ತಾವಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಪ್ರಸಕ್ತ ಸಾಲಿಗೆ ವೇತನವನ್ನು ಸೆಳೆಯಲು ಅಗತ್ಯವಿರುವ ರೂ.6.90ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-197-1-10-300ರಿಂದ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 236 ವೆಚ್ಚ 6/2020(ಇ) ದಿನಾಂಕ: 04ನೇ ಅಗಸ್ಟ್ 2020

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ತಾಲ್ಲೂಕು ಪಂಚಾಯತಿಗೆ ಕಾಲಂ 3 ಕಾರ್ಯಕ್ರಮದಡಿ ವೇತನ ವೆಚ್ಚಕ್ಕಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ರೂ6.90ಲಕ್ಷ (ರೂಪಾಯಿ ಆರು ಲಕ್ಷದ ತೊಂಬತ್ತು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1) ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿರುವ ನಿರ್ದೇಶನದಂತೆ ಕ್ರಮವಹಿಸಿ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು. (ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.)

| ಕ್ರಸಂ | ತಾಲ್ಲೂಕು ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515-00-197-1-10-300ರಡಿ ಬಿಡುಗಡೆಗೊಳಿಸಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 1 | 2 | 3 | 4 |
| 1 | ಮಂಗಳೂರು | 2515-00-102-0-61-005 | 6.90 |
| | ಒಟ್ಟು | | **6.90** |

ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ತಾಲ್ಲೂಕು ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

141478T?20
6.8.2020

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ), ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ

3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ದಕ್ಷಿಣ ಕನ್ನಡ.
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ, ಮಂಗಳೂರು.
7. ಜಿಲ್ಲಾ ಖಜಾನಾಧಿಕಾರಿಗಳು, ದಕ್ಷಿಣ ಕನ್ನಡ.
8. ರಕ್ಷಾ ಕಡತಕ್ಕೆ/ ಹೆಚ್ಚುವರಿ ಪ್ರತಿ